ರಾಷ್ಟ್ರ ಜಾಗೃತಿಯ ದೈನಿಕ
ಹೊಸ ದಿಗಂತ

**Tuesday 26th April 2022, Page No.03**

# 17th Annual Convocation Ceremony: RSST Hon. Sec.A.V.S. Murthy

## ದೇಶದ ಅಭಿವೃದ್ಧಿಗೆ ಎಲ್ಲರ ಸಹಕಾರ ಅಗತ್ಯ

**ಮೈಸೂರು:** ಆತ್ಮ ನಿರ್ಭರ ಭಾರತ ದೇಶದ ಅಭಿವೃದ್ಧಿಗೆ ಪ್ರತಿಯೊಬ್ಬ ಪ್ರಜೆಯೂ ಕೂಡ ತನ್ನ ಜವಾಬ್ದಾರಿಯನ್ನು ಅರಿತು ಕೆಲಸ ನಿರ್ವಹಿಸಿದಾಗ ಮಾತ್ರ ಉತ್ಕೃಷ್ಟ ಹಾಗೂ ಶ್ರೇಷ್ಠ ಭಾರತವನ್ನು ಕಟ್ಟಲು ಸಾಧ್ಯ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹಲೋತ್ ತಿಳಿಸಿದರು.

ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯಘಟಿಕೋತ್ಸವಭವನದಲ್ಲಿ ನಡೆದ ಕರಾಮುಕ್ತ ವಿಶ್ವವಿದ್ಯಾನಿಲಯದ 17ನೆ ವಾರ್ಷಿಕ ಘಟಿಕೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ವಿಶ್ವವಿದ್ಯಾನಿಲಯವು ಸಾಮರ್ಥ್ಯ, ರಾಷ್ಟ್ರೀಯ ಜವಾಬ್ದಾರಿಯ ಜೊತೆಗೆ ಎಲ್ಲರಿಗೂ ಎಲ್ಲಾ ಕಡೆಯಲ್ಲೂ ಉನ್ನತ ಶಿಕ್ಷಣವನ್ನು ನೀಡುತ್ತಿರುವುದು ಪ್ರಶಂಸನೀಯವಾಗಿದೆ ಎಂದು ತಿಳಿಸಿದರು.

ಗುರುಗಳ ಮಾರ್ಗದರ್ಶನ ತಂದೆ-ತಾಯಿ ಪರಿವಾರ ಸಹಯೋಗದಿಂದ ವಿದ್ಯಾರ್ಥಿಗಳು ಸಾಧನೆಯ ಮಟ್ಟ ಮುಟ್ಟಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಸಮಾಜ ಮುಖಿಯಾಗಿ ಕಾರ್ಯನಿರ್ವಹಿಸಿ ಸಮಾಜ



ಹಾಗೂ ಪೋಷಕರಿಗೆ ಗೌರವ ತಂದು ಕೊಡಬೇಕು ಎಂದು ಅವರು ತಿಳಿಸಿದರು.

ಇಂದು ನಾವು ಆನಂದ ಸಂಕೇಶ್ವರ್.ಜಿ, ಡಾ.ಎವಿಎಸ್ ಮೂರ್ತಿ ಮತ್ತು ಇಎಸ್ ಚಕ್ರವರ್ತಿ ಅವರು ಮಾಡಿದ ಗಮನಾರ್ಹ ಮತ್ತು ಅಮೂಲ್ಯವಾದ ಕೆಲಸಕ್ಕಾಗಿ ಗೌರವ ಪದವಿಗಳನ್ನು ನೀಡಲಾಗಿದೆ. ನಿಮ್ಮೆಲ್ಲರಿಗೂ ಅಭಿನಂದನೆಗಳು ಮತ್ತು ಶುಭಾಶಯಗಳು ಎಂದು ತಿಳಿಸಿದ ರಾಜ್ಯಪಾಲರು, ಇಂದು ಪದವಿ ಪಡೆದ ಎಲ್ಲಾ ವಿದ್ಯಾರ್ಥಿಗಳಿಗೆ ಅಭಿನಂದನೆಗಳು ಮತ್ತು ಶುಭಾಶಯಗಳು ಮತ್ತು ನಿಮ್ಮ ಉಜ್ವಲ ಭವಿಷ್ಯವನ್ನು ಹಾರೈಸುತ್ತೇನೆ ಎಂದರು.

### 8,338 ಅಭ್ಯರ್ಥಿಗಳಿಗೆ ಪದವಿ ಪ್ರದಾನ

ಇದೇ ವೇಳೆ ವಿವಿಧ ವಿಷಯಗಳಲ್ಲಿ ಪದವಿ ಪಡೆದ 8,338 ಅಭ್ಯರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು. ಇದರಲ್ಲಿ 3,272 ಪುರುಷರು ಮತ್ತು 5,066 ಮಹಿಳಾ ಅಭ್ಯರ್ಥಿಗಳು ಇದ್ದಾರೆ. 31 ಮಂದಿಗೆ ಪಿಹೆಚ್.ಡಿ ಪದವಿ ಪ್ರದಾನ ಮಾಡಲಾಯಿತು. 48 ಅಭ್ಯರ್ಥಿಗಳಿಗೆ ಚಿನ್ನದ ಪದಕ, 38 ಅಭ್ಯರ್ಥಿಗಳಿಗೆ ನಗದು ಬಹುಮಾನ ನೀಡಲಾಯಿತು.